# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **70(501)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.09.2022 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 1972 ರಿಂದ 2012 ರವರೆಗೆ ಪ್ರವರ್ಗ-1 ಜಾತಿಯ ವಿದ್ಯಾರ್ಥಿಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶುಲ್ಕ ವಿನಾಯಿತಿ ಸಂಪೂರ್ಣ ಶಿಕ್ಷಣ ಸೌಲಭ್ಯ ಇದ್ದದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ಸರ್ಕಾರದ ಆದೇಶ ಸಂಖ್ಯೆ: ಸಕಇ 28 ಬಿಸಿಎ 2012, ದಿನಾಂಕ:19.06.2012ರನ್ವಯ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ 'ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ' ಯನ್ನು ಸೃಜಿಸಿ, ಪ್ರವರ್ಗ-1ನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡಿಸಲಾಗಿರುತ್ತದೆ.<br>2013ನೇ ಸಾಲಿನಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಲಾಗುತ್ತಿದೆ . |
| ಆ) | ಪ್ರಸ್ತುತ ಈ ಸೌಲಭ್ಯ ನಿಂತುಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಪ್ರವರ್ಗ-1 ರಲ್ಲಿ ಬರುವ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಹಾಗೂ ಶಿಕ್ಷಣ ಸೌಲಭ್ಯ ನೀಡಲು ಮತ್ತು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಯಾವ ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ; | ಪ್ರಸ್ತುತ ಸದರಿ ಸೌಲಭ್ಯವನ್ನು ಸ್ಥಗಿತಗೊಳಿಸಿರುವುದಿಲ್ಲ.<br>ಮುಂದುವರೆದು, ಪ್ರವರ್ಗ-1 ರಲ್ಲಿನ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಹಾಗೂ ಶಿಕ್ಷಣ ಸೌಲಭ್ಯ ನೀಡಲು ಮತ್ತು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>**ಅ)ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ** ಕಾರ್ಯಕ್ರಮದಡಿಯಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ರೂ.2.50 ಲಕ್ಷಗಳ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ.<br>ಸದರಿ ಕಾರ್ಯಕ್ರಮದಡಿಯಲ್ಲಿ ಈ ಕೆಳಕಂಡಂತೆ ಕೋರ್ಸ್ ವಾರು ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. |

| ಕೋರ್ಸ್ ಗ್ರೂಪ್ | ವಿದ್ಯಾರ್ಥಿವೇತನ (ರೂ.ಗಳಲ್ಲಿ) |
|---|---|
| ಗ್ರೂಪ್-ಎ | 3500/- |
| ಗ್ರೂಪ್-ಬಿ | 3350/- |
| ಗ್ರೂಪ್-ಸಿ | 2100/- |
| ಗ್ರೂಪ್-ಡಿ | 1600/- |

ಆ) **ಶುಲ್ಕ ಮರುಪಾವತಿ ಮತ್ತು ವಿನಾಯತಿ** ಯೋಜನೆಯಡಿಯಲ್ಲಿ ಶುಲ್ಕ ಮರುಪಾವತಿ ಮಂಜೂರು ಮಾಡಲು ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷದ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ.

ಸದರಿ ಯೋಜನೆಯಡಿಯಲ್ಲಿ ಪ್ರವರ್ಗ-1ರ ಹೊಸ ವಿದ್ಯಾರ್ಥಿಗಳಿಗೆ ಶೇ.40% ಅಂಕಗಳನ್ನು ಹಾಗೂ ನವೀಕರಣ ವಿದ್ಯಾರ್ಥಿಗಳಿಗೆ ಶೇ.50% ಅಂಕಗಳನ್ನು ನಿಗದಿಪಡಿಸಲಾಗಿದೆ. ಮುಂದುವರೆದು, ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆಯಲ್ಲಿ ಶುಲ್ಕ ಮರುಪಾವತಿಯನ್ನು ಮಾಡಲಾಗುತ್ತಿದೆ.

2013ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ದಿನಾಂಕ: 05.10.2013. ರಲ್ಲಿನ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸಲಾಗುತ್ತಿದೆ .

ಶುಲ್ಕ ವಿನಾಯಿತಿ ಯೋಜನೆಯಡಿ ಯಲ್ಲಿ ಈ ಕೆಳಕಂಡ 5 ಶುಲ್ಕಗಳನ್ನು ಮರುಪಾವತಿ ಮಾಡಲಾಗುತ್ತದೆ.

1. ಭೋದನಾ ಶುಲ್ಕ
2. ಪ್ರಯೋಗಾಲಯ ಶುಲ್ಕ
3. ಪರೀಕ್ಷಾ ಶುಲ್ಕ
4. ಕ್ರೀಡಾ ಶುಲ್ಕ
5. ಗ್ರಂಥಾಲಯ ಶುಲ್ಕ

ಈ 5 ಶುಲ್ಕಗಳ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯು 429 ಬಿಎಂಎಸ್ 2014 ದಿನಾಂಕ:04.09.2014ರಲ್ಲಿ ಪೂರ್ಣ ಶುಲ್ಕಗಳ ಪಾವತಿಯೊಂದಿಗೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಕಾರ್ಯಕ್ರಮದಡಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ವಿವಿಧ ಕೋರ್ಸ್ ಗಳಲ್ಲಿ 65% ಕ್ಕಿಂತ

| | | |
|---|---|---|
| | | ಹೆಚ್ಚಿನ ಅಂಕಗಳನ್ನುಪಡೆದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯ/ಶಿಕ್ಷಣ ಇಲಾಖೆಗಳು ಆಯಾ ಕೋರ್ಸ್‌ಗಳಿಗೆ ಸರ್ಕಾರಿ ಸಂಸ್ಥೆಗಳಿಗೆ ನಿಗದಿಪಡಿಸುವ ದರಗಳಲ್ಲಿ ಇತರೆ ಪೂರ್ಣ ಶುಲ್ಕಗಳನ್ನು ಪಾವತಿಸಿ ಅವರ ಶಿಕ್ಷಣವನ್ನು ಮುಂದುವರೆಸಲು ಅವಕಾಶ ಕಲ್ಪಿಸಲಾಗಿದೆ.<br><br>ಇ)**ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯಯೋಜನೆ)** ಯೋಜನೆಯಡಿಯಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲು ರೂ.2.50ಲಕ್ಷಗಳ ಆದಾಯಮಿತಿಯನ್ನು ನಿಗದಿಪಡಿಸಲಾಗಿದೆ.<br><br>ವಿದ್ಯಾಸಿರಿ ಯೋಜನೆಯಡಿಯಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಸೀಟು ದೊರಕದ ಅರ್ಹರಿರುವ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ.1500/- ರಂತೆ, ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟುರೂ.15000/- ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ. |
| ಇ) | ಕ್ರಮ ಕೈಗೊಳ್ಳದಿದ್ದಲ್ಲಿ ಮುಂದಿನ ದಿನಗಳಲ್ಲಿ ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಮತ್ತು ಶಿಕ್ಷಣ ಸೌಲಭ್ಯಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲಿ, ಯಾವ ದಿನಾಂಕದಿಂದ ಈ ಯೋಜನೆಯನ್ನು ಮರು ಸ್ಥಾಪಿಸಲಾಗುವುದು? | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಪ್ರವರ್ಗ-1ರಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವ ಸಲುವಾಗಿ ವಿವಿಧ ಕಾರ್ಯಕ್ರಮಗಳಡಿ ಆದಾಯದ ಮಿತಿಯನ್ನು ಹೆಚ್ಚಿಸಲಾಗಿರುತ್ತದೆ ಹಾಗೂ ಪ್ರವರ್ಗ-1ರಲ್ಲಿ ಬರುವ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ಶುಲ್ಕ ವಿನಾಯಿತಿ ಹಾಗೂ ಶಿಕ್ಷಣ ಸೌಲಭ್ಯ ನೀಡಲು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ಶುಲ್ಕ ವಿನಾಯತಿ ಹಾಗೂ ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯಯೋಜನೆ)ಗಳನ್ನು ಈಗಾಗಲೇ ಅನುಷ್ಠಾನಗೊಳಿಸಲಾಗುತ್ತಿದೆ. |

**ಸಂಖ್ಯೆ: ಹಿಂವಕ 559 ಬಿಎಂಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು